Computer

STAR

# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 368 |
| ಸದಸ್ಯರ ಹೆಸರು | : | ಶ್ರೀ ಡಿ. ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಕಂದಾಯ ಸಚಿವರು |
| ಉತ್ತರಿಸುವ ದಿನಾಂಕ | : | 11.12.2024 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಆಸ್ತಿ ಮಾಲೀಕತ್ವ ಸಂಬಂಧ ಪಹಣಿಗಳ ಕಲಂ 9 ಮತ್ತು 11ರಲ್ಲಿ ವಕ್ಫ್ ಎಂದು ನಮೂದಾಗಿರುವ ಜಮೀನುಗಳಿಗೆ ಸಂಬಂಧಿಸಿದಂತೆ ರಾಜ್ಯದ ರೈತರುಗಳಿಗೆ ಹಾಗೂ ಸಾರ್ವಜನಿಕರಿಗೆ ನೋಟೀಸ್ ಜಾರಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿದೆ. |
| (ಆ) | ವಕ್ಫ್ ಆಸ್ತಿ ವಿವಾದವು ದಿನ ದಿನಕ್ಕೆ ರಾಜ್ಯವನ್ನು ವ್ಯಾಪಿಸುತ್ತಿದ್ದು, ಸಾವಿರಾರು ರೈತರು ಭೂ ಮಾಲೀಕತ್ವಕ್ಕಾಗಿ ಕೋರ್ಟ್ ಹಾಗೂ ಸರ್ಕಾರಿ ಕಛೇರಿಗಳಿಗೆ ಅಲೆದಾಡುವ ಸ್ಥಿತಿ ನಿರ್ಮಾಣವಾಗಿರುವುದರಿಂದ ರೈತರು ಆತಂಕಕ್ಕೆ ಒಳಗಾಗಿರುವುದು ನಿಜವೇ: | ರಾಜ್ಯದಲ್ಲಿ ವಕ್ಫ್ ಆಸ್ತಿಗಳಿಗೆ ಸಂಬಂಧಿಸಿದಂತೆ ನೋಟೀಸ್‌ಗಳನ್ನು ನೀಡಲು ಕಂದಾಯ ಇಲಾಖೆಯಿಂದ ಯಾವುದೇ ನಿರ್ದೇಶನ ನೀಡಿರುವುದಿಲ್ಲ. ಆದಾಗ್ಯೂ ಕೆಲವು ಜಿಲ್ಲೆಗಳಲ್ಲಿ ಮಾತ್ರ ವಕ್ಫ್ ಮಂಡಳಿಯ ಗೆಜೆಟ್ ಅಧಿಸೂಚನೆಯ ಮೇರೆಗೆ ನೋಟೀಸುಗಳನ್ನು ನೀಡಿರುವುದು ಕಂಡುಬಂದಿರುತ್ತದೆ. |
| (ಇ) | ಈ ವಿವಾದದ ಪರಿಹಾರಕ್ಕೆ ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು ? | ಕೆಲವು ರೈತರ ಹಾಗೂ ಇತರ ಆಸ್ತಿಗಳನ್ನು ವಕ್ಫ್ ಹೆಸರಿಗೆ ಖಾತೆ ಮಾಡುತ್ತಿದ್ದಾರೆ ಎಂಬ ದೂರಿನ ಹಿನ್ನೆಲೆಯಲ್ಲಿ ಕಂದಾಯ ಇಲಾಖೆಯಿಂದ ಸರ್ಕಾರದ ಪತ್ರ ಸಂಖ್ಯೆ:ಕಂಇ 99 ಟಿಆರ್‌ಎಂ 2024, ದಿನಾಂಕ:09.11.2024ರಲ್ಲಿ ಈ ಕೆಳಕಂಡ ನಿರ್ದೇಶನಗಳನ್ನು ನೀಡಲಾಗಿರುತ್ತದೆ:<br>1. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಮ್ಯುಟೇಷನ್ ಮಾಡಲು ಯಾವುದೇ ಕಛೇರಿ ಅಥವಾ ಯಾವುದೇ ಪ್ರಾಧಿಕಾರದಿಂದ ನೀಡಲಾದ ನಿರ್ದೇಶನಗಳನ್ನು ತಕ್ಷಣದಿಂದಲೇ ಹಿಂಪಡೆಯುವುದು ಹಾಗೂ ಮ್ಯುಟೇಷನ್ ಪ್ರಕ್ರಿಯೆಯನ್ನು ಕೂಡಲೇ ಸ್ಥಗಿತಗೊಳಿಸುವುದು;<br>2. ಈ ಕುರಿತು ನೀಡಲಾದ ಎಲ್ಲಾ ನೋಟೀಸುಗಳನ್ನು ಹಿಂಪಡೆಯುವುದು;<br>3. ಸದರಿ ಜಮೀನುಗಳಲ್ಲಿ ವ್ಯವಸಾಯ ಮಾಡುತ್ತಿರುವ ರೈತರುಗಳ ವಿರುದ್ಧ ಯಾವುದೇ ಕ್ರಮವನ್ನು ಜರುಗಿಸತಕ್ಕದಲ್ಲ. |

**ಸಂ:ಕಂಇ 235 ಟಿಆರ್‌ಎಂ 2024**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು